ಆರೋಗ್ಯ ರಕ್ಷಾ ಸಮಿತಿ

2832 (2988), ಶ್ರೀ ಮಂಜುನಾಥ ಗೌಡ ಕೆ.ಎಸ್. (ಮಾಲೂರು)

ಅ) ರಾಜ್ಯದ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಹಂತದಲ್ಲಿ ರಚಿಸಲಾಗಿರುವ ಆರೋಗ್ಯ ರಕ್ಷಾ ಸಮಿತಿಗಳು ನಿಷ್ಕ್ರೀಯಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಇವುಗಳ ಪುನಶ್ಚೇತನಗೊಳಿಸಲು ಸರ್ಕಾರ ಹಮ್ಮಿಕೊಂಡಿರುವ ಕ್ರಮಗಳೇನು;

ಇ) ಕೋಲಾರ ಜಿಲ್ಲೆಯಲ್ಲಿ ಡೆಂಗ್ಯೂ ಜ್ವರದಿಂದ ಬಳಲುತ್ತಿರುವವರ ಸಂಖ್ಯೆ ಎಷ್ಟು (ತಾಲ್ಲೂಕುವಾರು ಮಾಹಿತಿ ನೀಡುವುದು);

ಈ) ಸದರಿ ರೋಗದಿಂದ ಬಳಲುತ್ತಿರುವವರಿಗೆ ಚಿಕಿತ್ಸೆ ನೀಡಲು ಇಲ್ಲಿನ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಸದರಿ ರೋಗಕ್ಕೆ ಆಸ್ಪತ್ರೆಗಳಲ್ಲಿ ಸರಿಯಾಗಿ ಔಷಧಿಗಳು ದೊರಕದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಯು.ಟಿ.ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲ್ಲೂಕಿನಲ್ಲಿ ಮಾತ್ರ 4 ಖಿತ ಡೆಂಗಿ ಪ್ರಕರಣಗಳು ವರದಿಯಾಗಿರುತ್ತದೆ. ಉಳಿದ ಕೋಲಾರ, ಮಾಲೂರು, ಶ್ರೀನಿವಾಸಪುರರ, ಮುಳಬಾಗಿಲು ತಾಲ್ಲೂಕುಗಳಲ್ಲಿ ಖಚಿತ ಡೆಂಗಿ ಪ್ರಕರಣಗಳು ವರದಿಯಾಗಿರುವುದಿಲ್ಲ.

ಈ) ಕೋಲಾರ ಜಿಲ್ಲೆಯಲ್ಲಿ ಕಾರ್ಯನಿರತ ವೈದ್ಯರ ಸಂಖ್ಯೆ ಈ ಕೆಳಕಂಡಂತಿವೆ.

	ಪ್ರಾ.ಆ.ಕೇಂದ್ರ	ತಾಲ್ಲೂಕು	ಜಿಲ್ಲಾ ಆಸ್ಪತ್ರೆ
ಮಂಜೂರು	80	44	43
ಕಾರ್ಯನಿರತರು	68	36	28
ಖಾಲಿ ಹುದ್ದೆ	12	08	15

ವೈದ್ಯರ ಕೊರತೆಯಿರುವ ಆಸ್ಪತ್ರೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ 12 ವೈದ್ಯರನ್ನು ನೇಮಿಸಿಕೊಳ್ಳಲಾಗಿದೆ. ಆದುದರಿಂದ ಜಿಲ್ಲೆಯಲ್ಲಿ ಜ್ವರಪೀಡಿತರ ಚಿಕಿತ್ಸೆಗೆ ಸರ್ಕಾರವು ಸೂಕ್ತ ಕ್ರಮಕೈಗೊಂಡಿರುತ್ತದೆ ಮತ್ತು ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲು ವೈದ್ಯರ ಕೊರತೆ ಇರುವುದಿಲ್ಲ.

ಉ) ಡೆಂಗಿ ಜ್ವರಕ್ಕೆ ನಿಖರವಾದ ಚಿಕಿತ್ಸೆ ಇರರುವುದಿಲ್ಲ. ಆದರೆ ರೋಗಲಕ್ಷಣಗಳಿಗೆ ಅನುಗುಣವಾಗಿ ಚಿಕಿತ್ಸೆ ನೀಡಲಾಗುತ್ತದೆ. ಇದಕ್ಕೆ ಬೇಕಾದ ಎಲ್ಲಾ ಔಷಧಿಗಳು ಜಿಲ್ಲೆಯ ಎಲ್ಲಾ ಆಸ್ಪತ್ರೆಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿರುತ್ತದೆ.

ಅಕ್ರಮವಾಗಿ ಸಾಗಾಟ ಮಾಡುವ ಅಕ್ಕಿ

2833 (2989), ಶ್ರೀ ಮಂಜುನಾಥ ಗೌಡ ಕೆ.ಎಸ್. (ಮಾಲೂರು)

ಅ) ರಾಜ್ಯ ಸರ್ಕಾರವು ಅನ್ನಭಾಗ್ಯ ಯೋಜನೆಯಡಯಲ್ಲಿ ಪ್ರತಿ ಕೆ.ಜಿ.ಗೆ ಒಂದು ರೂ. ನಂತೆ ವಿತರಣೆ ಮಾಡುತ್ತಿರುವ ಅಕ್ಕಿಯನ್ನು ಕೆಲವರು ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;